## 20. ಹಲವೆಡೆ ಭಾರಿ ಮಳೆ: 9 ಸಾವು

ರಾಜ್ಯದಲ್ಲಿ ಮತ್ತೊಮ್ಮೆ ಮಳೆಯ ಅರ್ಭಟ ಜೋರಾಗಿದ್ದು, ಮಲೆನಾಡು, ಕರಾವಳಿ ಮತ್ತು ಉತ್ತರ ಕರ್ನಾಟಕ ಭಾಗದ ಬಹುತೇಕ ಜಿಲ್ಲೆಗಳಲ್ಲಿ ಪ್ರವಾಹ ಪರಿಸ್ಥಿತಿ ನಿರ್ಮಾಣವಾಗಿದೆ. ಕಳೆದೆರಡು ದಿನಗಳಿಂದ ಸುರಿಯುತ್ತಿರುವ ಭಾರಿ ಮಳೆಯಿಂದ ದಕ್ಷಿಣ ಕನ್ನಡ, ಉಡುಪಿ, ಚಿಕ್ಕಮಗಳೂರು, ಶಿವಮೊಗ್ಗ, ಧಾರವಾಡ, ಬೆಳಗಾವಿ, ಕೊಡಗು ಜಿಲ್ಲೆಗಳ ನದಿಗಳಲ್ಲಿ ಪ್ರವಾಹ ಬಂದಿದೆ. ಕೊಡಗಿನಲ್ಲಿ 24 ಗಂಟೆಗಳಲ್ಲಿ ಭಾರಿ ಮಳೆಯಾಗಿದ್ದು, ಹಲವೆಡೆ ಭೂಕುಸಿತ ಸಂಭವಿಸಿದೆ. ತಲಕಾವೇರಿ ಕ್ಷೇತ್ರದ ಪ್ರಧಾನ ಅರ್ಚಕ ಟಿ.ಎಸ್. ನಾರಾಯಣ ಆಚಾರ್, ಪತ್ನಿ ಶಾಂತಾ, ಸಹೋದರ ಆನಂದತೀರ್ಥ, ಸಹಾಯಕ ಅರ್ಚಕರಾಗಿದ್ದ ಪವನ್ ಭಟ್, ರವಿಕಿರಣ್ ಭಟ್ ಅವರು ಭೂಕುಸಿತದಲ್ಲಿ ಮಣ್ಣುಪಾಲಾದ ಮನೆಯಡಿ ಸಿಲುಕಿ ಮೃತಪಟ್ಟಿದ್ದಾರೆ. ಕೊಡಗು ಜಿಲ್ಲೆಯ ಕಾವೇರಿ, ಲಕ್ಷ್ಮಣ ತೀರ್ಥ ನದಿಗಳು ಉಕ್ಕಿ ಹರಿಯುತ್ತಿರುವುದರಿಂದ ಅಪಾರ ಪ್ರಮಾಣದ ಬೆಳೆ ಮತ್ತು ಮನೆಗಳಿಗೆ ಹಾನಿಯಾಗಿದೆ.

ಮೈಸೂರು ಜಿಲ್ಲೆಯ ಎಚ್.ಡಿ.ಕೋಟೆ ತಾಲ್ಲೂಕಿನ ಅಣ್ಣೂರಿನಲ್ಲಿ, ಉಡುಪಿ ಜಿಲ್ಲೆಯ ನಿಟ್ಟೂರಿನಲ್ಲಿ ಉತ್ತರ ಕನ್ನಡ ಜಿಲ್ಲೆಯ ಅಂಕೋಲಾ ತಾಲ್ಲೂಕಿನಲ್ಲಿ ಗಂಗಾವಳಿ ನದಿ ಉಕ್ಕಿ ಹರಿಯುತ್ತಿದ್ದು ಮತ್ತು ಕಲಘಟಗಿ ತಾಲ್ಲೂಕಿನ ಗಂಜಿಗಟ್ಟಿಲ್ಲಿ, ಕರಾವಳಿ ಹಾಗೂ ದಕ್ಷಿಣ ಒಳನಾಡಿನಲ್ಲಿ ಆಗಸ್ಟ್ 10ರ ವರೆಗೆ ವ್ಯಾಪಕ ಮಳೆಯಾಗಲಿದೆ. ಬೆಳಗಾವಿ, ಬೀದರ್, ಹಾವೇರಿ, ಕಲಬುರ್ಗಿ, ವಿಜಯಪುರ, ಯಾದಗಿರಿ ಜಿಲ್ಲೆಗಳಲ್ಲಿ ಯೆಲ್ಲೊ ಅಲರ್ಟ್ ಘೋಷಿಸಲಾಗಿದೆ.

**ತುರ್ತು ಪರಿಹಾರಕ್ಕೆ ರೂ. 50 ಕೋಟಿ ಬಿಡುಗಡೆ:–**ರಾಜ್ಯದ ಎಲ್ಲೆಡೆ ಮಳೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಸೂಕ್ತ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಂಡು, ತಕ್ಷಣದ ಪರಿಹಾರ ಕಾರ್ಯಕ್ಕೆ ರೂ.50 ಕೋಟಿ ಬಿಡುಗಡೆ ಮಾಡಲು ಸರ್ಕಾರದ ಮುಖ್ಯ ಕಾರ್ಯದರ್ಶಿ ಟಿ.ಎಂ.ವಿಜಯಭಾಸ್ಕರ್ ಅವರಿಗೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಸೂಚನೆ ನೀಡಿದ್ದಾರೆ. ಪ್ರವಾಹ ಪೀಡಿತ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಜೊತೆ ಆಸ್ಪತ್ರೆಯಿಂದಲೇ ದೂರವಾಣಿ ಮೂಲಕ ಮಾತನಾಡಿದ ಅವರು ಮಳೆ ಮತ್ತು ಪ್ರವಾಹದ ವಿವರಗಳನ್ನು ಪಡೆದುಕೊಂಡರು.

**ಏಳು ಜಿಲ್ಲೆಗಳಲ್ಲಿ ಆರೆಂಜ್ ಅಲರ್ಟ್:–** ದಕ್ಷಿಣ ಕನ್ನಡ, ಉಡುಪಿ, ಚಿಕ್ಕಮಗಳೂರು, ಹಾಸನ, ಕೊಡಗು ಹಾಗೂ ಶಿವಮೊಗ್ಗ ಜಿಲ್ಲೆಗಳಲ್ಲಿ ಧಾರಾಕಾರ ಮಳೆಯಾಗುವ ನಿರೀಕ್ಷೆ ಇರುವುದರಿಂದ ಮೀನುಗಾರರು ಕಡಲಿಗೆ ಇಳಿಯದಂತೆ ಇಲಾಖೆ ಎಚ್ಚರಿಸಿದೆ.

ಆಧಾರ:ವಿಶ್ವವಾಣಿ, ದಿನಾಂಕ:07.08.2020